# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ | : | 1179 |
| ಸದಸ್ಯರ ಹೆಸರು | : | ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 20.12.2018. |
| ಉತ್ತರಿಸಬೇಕಾದ ಸಚಿವರು | : | ಮುಖ್ಯಮಂತ್ರಿ |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | 1987–95ರವರೆಗಿನ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸಲು ಎಷ್ಟು ಪ್ರಸ್ತಾವನೆಗಳು ಬಂದಿವೆ; ಯಾವಾಗ ಅನುದಾನಕ್ಕೆ ಒಳಪಡಿಸಲಾಗುವುದು; ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಅನುದಾನಕ್ಕೆ ಒಳಪಡಿಸಲು ವಿಧಿಸಿರುವ ಷರತ್ತುಗಳು ಹಾಗೂ ನಿಬಂಧನೆಗಳೇನು; ವಿಧಿಸಿದ ಷರತ್ತುಗಳ ಹಾಗೂ ನಿಯಮಗಳ ಸಡಿಲಿಕೆ ಬಗ್ಗೆ ಈ ಹಿಂದೆ ಭರವಸೆ ನೀಡಲಾಗಿತ್ತೆ; ಆ ನಿಯಮಗಳನ್ನು ಸಡಿಲಿಕೆ ಮಾಡಲು ಇಲಾಖೆ ಮುಂದಾಗುವುದೇ; | ಕಳೆದ ಮೂರು ವರ್ಷಗಳಲ್ಲಿ ವೇತನಾನುದಾನಕ್ಕೆ ಒಳಪಡಿಸುವಂತೆ ಕೋರಿ ಸರ್ಕಾರಕ್ಕೆ ಸಲ್ಲಿಕೆಯಾಗಿದ್ದ ಪ್ರಸ್ತಾವನೆಗಳ ಸಂಖ್ಯೆ :-<br><br>ಪ್ರಾಥಮಿಕ ಶಾಲೆ: 116; ಪ್ರೌಢ ಶಾಲೆ: 32; ಪದವಿಪೂರ್ವ ಕಾಲೇಜು: 29; ಒಟ್ಟು: 177<br><br>ಮೇಲ್ಕಂಡ 177 ಶಾಲಾ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು, ಅದರಂತೆ ಪರಿಶೀಲಿಸಿ 90 ಪ್ರಾಥಮಿಕ, 26 ಪ್ರೌಢಶಾಲೆಗಳು ಹಾಗೂ 4 ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲಾಗಿದೆ. ಬಾಕಿ ಪ್ರಸ್ತಾವನೆಗಳು ಪರಿಶೀಲನೆಯಲ್ಲಿರುತ್ತವೆ.<br><br>ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ಅನುದಾನಕ್ಕೆ ಒಳಪಡಿಸಲು ಈ ಕೆಳಕಂಡ ಷರತ್ತುಗಳು ಮತ್ತು ನಿಬಂಧನೆಗಳನ್ನು ವಿಧಿಸಲಾಗಿದೆ.<br><br>ಪ್ರೌಢಶಾಲೆ:-<br>1. ನಿರ್ಧಿಷ್ಟ ಖಾಲಿ ಹುದ್ದೆಯು ಮೂಲತಃ ಅನುದಾನಿತ ಹುದ್ದೆಯಾಗಿರತಕ್ಕದ್ದು.<br>2. ಅರ್ಹತೆ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿ ಮಾನದಂಡಗಳನ್ನು ಪಾಲಿಸಿ ಪಾರದರ್ಶಕವಾಗಿ ಆಯ್ಕೆ ಪ್ರಕ್ರಿಯೆಯನ್ನು ನಡೆಸತಕ್ಕದ್ದು.<br>3. ಶಾಲೆಯ ಎಸ್.ಎಸ್.ಎಲ್.ಸಿ ಫಲಿತಾಂಶವು ಕಳೆದ 5 ಶೈಕ್ಷಣಿಕ ವರ್ಷಗಳ ಜಿಲ್ಲಾ ಸರಾಸರಿ ಫಲಿತಾಂಶಕ್ಕಿಂತ ಉತ್ತಮವಾಗಿರಬೇಕು.<br>4. ಮಕ್ಕಳ ದಾಖಲಾತಿ/ಹಾಜರಾತಿ ನಿಗಧಿತ ಮಟ್ಟದಲ್ಲಿರಬೇಕು.<br>5. ಮೂಲಭೂತ ಸೌಕರ್ಯಗಳನ್ನು ಹೊಂದಿರುವುದು.<br><br>ಪದವಿ ಪೂರ್ವ:-<br>1. ನಿರ್ಧಿಷ್ಟ ಖಾಲಿ ಹುದ್ದೆಯು ಮೂಲತಃ ಅನುದಾನಿತ ಹುದ್ದೆಯಾಗಿರತಕ್ಕದ್ದು.<br>2. ಅರ್ಹತೆ, ವಿದ್ಯಾರ್ಹತೆ, ಮೀಸಲಾತಿ ಇತ್ಯಾದಿ ಮಾನದಂಡಗಳನ್ನು ಪಾಲಿಸಿ ಪಾರದರ್ಶಕವಾಗಿ ಆಯ್ಕೆ ಪ್ರಕ್ರಿಯೆಯನ್ನು ನಡೆಸತಕ್ಕದ್ದು.<br>3. 20 ಗಂಟೆಗಳ ಕಾರ್ಯಭಾರವನ್ನು ಹೊಂದಿರಬೇಕು.<br><br>ಖಾಸಗಿ ಪ್ರೌಢಶಾಲೆಗಳಿಗೆ ಸರ್ಕಾರದಿಂದ ಅನುದಾನ ಒದಗಿಸುವ ಪ್ರಮುಖ ಉದ್ದೇಶವೇ ಶೈಕ್ಷಣಿಕ ಗುಣಮಟ್ಟ ಕಾಪಾಡುವುದಾಗಿದೆ. ಅಲ್ಲದೆ, ಸಾರ್ವಜನಿಕ ಹಣದ ಸದ್ಬಳಕೆಯನ್ನು ಸಹ ಸಾಧಿಸಬೇಕಾಗಿರುವುದರಿಂದ ಸದರಿ ನಿಯಮಗಳನ್ನು ಸಡಿಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

| | | |
|---|---|---|
| ಆ) | 1995ರ ನಂತರ ಅನುದಾನ ರಹಿತ ಶಾಲಾ ಕಾಲೇಜುಗಳನ್ನು ಅನುದಾನಕ್ಕೆ ಒಳಪಡಿಸುವ ಕುರಿತು ಸರ್ಕಾರದ ನಿಲುವೇನು; ಅನುದಾನಕ್ಕೆ ಒಳಪಡಿಸಲು ಈವರೆಗೂ ಬಂದಿರುವ ಮನವಿಗಳು ಎಷ್ಟು; | 1995ರ ನಂತರ ಪ್ರಾರಂಭಗೊಂಡ ಅನುದಾನರಹಿತ ಪ್ರಾಥಮಿಕ ಶಾಲೆ, ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಸಹಾಯಾನುದಾನ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. |
| ಇ) | ಅನುದಾನಿತ ಪ್ರಾಥಮಿಕ, ಪ್ರೌಢ ಹಾಗೂ ಪದವಿಪೂರ್ವ ಶಾಲಾ-ಕಾಲೇಜುಗಳಲ್ಲಿ ಖಾಲಿಯಾಗಿರುವ ಬೋಧಕ ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಸರ್ಕಾರ ತೆಗೆದುಕೊಂಡ ಕ್ರಮ ಏನು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ; ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ; (ಆದೇಶಗಳ ಪ್ರತಿ ಒದಗಿಸಿ) ಅವುಗಳಲ್ಲಿ ಎಷ್ಟು ಹುದ್ದೆಗಳ ಭರ್ತಿ ಮಾಡಲಾಗಿದೆ; ಬಾಕಿ ಉಳಿದ ಹುದ್ದೆಗಳೆಷ್ಟು; ಅವುಗಳನ್ನು ಯಾವಾಗ ಭರ್ತಿ ಮಾಡಲಾಗುವುದು? | <u>ಪ್ರಾಥಮಿಕ ಶಾಲೆಗೆ ಸಂಬಂಧಿಸಿದಂತೆ</u> :-<br>ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ಖಾಲಿಯಾಗುವ ಬೋಧಕ ಹುದ್ದೆಗಳನ್ನು ಹೆಚ್ಚುವರಿ ಸಿಬ್ಬಂದಿಗಳಿಂದ ಮಾತ್ರ ಭರ್ತಿ ಮಾಡಲು ಅವಕಾಶವಿದ್ದು, ನೇರ ನೇಮಕಾತಿ ಮೂಲಕ ಹುದ್ದೆ ಭರ್ತಿಗೆ ಅವಕಾಶವಿಲ್ಲ.<br>ಬೋಧಕೇತರ ಹುದ್ದೆಗಳ ಭರ್ತಿಗೆ ಖಾಸಗಿ ಪ್ರಾಥಮಿಕ ಶಾಲಾ ಸಿಬ್ಬಂದಿ ಮಾದರಿ ರಚನೆಯಲ್ಲಿ ಅವಕಾಶವಿರುವುದಿಲ್ಲ.<br><u>ಪ್ರೌಢ ಶಾಲೆಗೆ ಸಂಬಂಧಿಸಿದಂತೆ</u> :-<br>ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31.12.2015ರವರೆಗೆ ನಿಧನ, ನಿವೃತ್ತಿ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾಗಿರುವ 3633 ಬೋಧಕ ಹುದ್ದೆಗಳನ್ನು ಆರ್ಥಿಕ ಮಿತವ್ಯಯವನ್ನು ಸಡಿಲಿಕೆ ಮಾಡಿ ಭರ್ತಿ ಮಾಡಲು ಅನುಮತಿಸಲಾಗಿದೆ. (ಆದೇಶಗಳ ಪ್ರತಿ ಅನುಬಂಧಿಸಿದೆ)<br>ಪ್ರಸ್ತುತ 781 ಹುದ್ದೆಗಳನ್ನು ಭರ್ತಿ ಮಾಡಲಾಗಿದೆ. 2851 ಹುದ್ದೆಗಳು ಭರ್ತಿ ಮಾಡಲು ಬಾಕಿಯಿರುತ್ತವೆ.<br>ಬೋಧಕೇತರ (ದ್ವಿ.ದ.ಸ) ಹುದ್ದೆಯನ್ನು ಭರ್ತಿಮಾಡಲು ಆರ್ಥಿಕ ಮಿತವ್ಯಯ ಜಾರಿಯಲ್ಲಿ ಇರುತ್ತದೆ, ಬೋಧಕೇತರ (ಗ್ರೂಪ್-ಡಿ) ಸೇವೆಯನ್ನು ಹೊರಗುತ್ತಿಗೆ ಮೂಲಕ ಪಡೆಯಲು ಅವಕಾಶ ಕಲ್ಪಿಸಿದೆ.<br><u>ಪದವಿಪೂರ್ವ ಕಾಲೇಜಿಗೆ ಸಂಬಂಧಿಸಿದಂತೆ</u> :-<br>ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಿನಾಂಕ: 31.12.2015ರವರೆಗೆ ವಿವಿಧ ಕಾರಣಗಳಿಂದ ಖಾಲಿಯಾದ 808 ಉಪನ್ಯಾಸಕ ಹುದ್ದೆಗಳನ್ನು ಭರ್ತಿಮಾಡಲು ಅನುಮತಿ ನೀಡಲಾಗಿದೆ. (ಆದೇಶಗಳ ಪ್ರತಿ ಅನುಬಂಧಿಸಿದೆ)<br>ಈ ಪೈಕಿ 264 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ. 544 ಹುದ್ದೆಗಳು ಭರ್ತಿ ಮಾಡಲು ಬಾಕಿಯಿರುತ್ತವೆ.<br>ಬೋಧಕೇತರ (ದ್ವಿ.ದ.ಸ ಮತ್ತು ಪ್ರ.ದ.ಸ.) ಹುದ್ದೆಯನ್ನು ಭರ್ತಿಮಾಡಲು ಆರ್ಥಿಕ ಮಿತವ್ಯಯ ಜಾರಿಯಲ್ಲಿ ಇರುತ್ತದೆ, ಬೋಧಕೇತರ (ಗ್ರೂಪ್-ಡಿ) ಸೇವೆಯನ್ನು ಹೊರಗುತ್ತಿಗೆ ಮೂಲಕ ಪಡೆಯಲು ಅವಕಾಶ ಕಲ್ಪಿಸಿದೆ.<br>ಈ ವಿಚಾರದಲ್ಲಿ ಸಂಬಂಧಪಟ್ಟ ಆಡಳಿತ ಮಂಡಳಿಯವರಿಂದ ಪ್ರಸ್ತಾವನೆಗಳು ಬಂದಲಿ ನಿಯಮಾನುಸಾರ ಪರಿಶೀಲಿಸಿ ಅರ್ಹ ಪ್ರಕರಣಗಳಿಗೆ ಅನುಮತಿ ನೀಡಲು ಕ್ರಮವಹಿಸಲಾಗುತ್ತಿದೆ. |

(ಹೆಚ್. ಡಿ. ಕುಮಾರಸ್ವಾಮಿ)
ಮುಖ್ಯಮಂತ್ರಿ

**ಸಂಖ್ಯೆ: ಇಡಿ 708 ಎಸ್ಇಎಸ್ 2018)**